# ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ

(ಕರ್ನಾಟಕ ಸರ್ಕಾರದ ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯ)

ಸರ್ಕಾರಿ ತಾಂತ್ರಿಕ ಮಹಾವಿದ್ಯಾಲಯ ಆವರಣ, ತಳಕಲ್-583 231, ಕೊಪ್ಪಳ ಜಿಲ್ಲೆ, ಕರ್ನಾಟಕ

ಸಂಖ್ಯೆ: ಕೊ.ವಿ.ವಿ/ಸ್ನಾತಕ-ಪ್ರವೇ/2023-24/02 ದಿನಾಂಕ: 27.05.2023

## ಆದೇಶ

**ವಿಷಯ:** 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಶೈಕ್ಷಣಿಕ ವೇಳಾಪಟ್ಟಿಯ ಕುರಿತು.

**ಉಲ್ಲೇಖ:** 01. ಸರ್ಕಾರದ ಆದೇಶ ಸಂಖ್ಯೆ ಇಡಿ/80/ಯುಎನ್ಇ 2023, ಬೆಂಗಳೂರು, ಪತ್ರ ದಿನಾಂಕ: 23-05-2023

02. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 27.05.2023.

******

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ ಎಲ್ಲಾ ಸ್ನಾತಕ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ತಿಳಿಯಪಡಿಸವುದೇನೆಂದರೆ, ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ ಇವರು 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿ ಸೆಮಿಸ್ಟರ್‌ಗಳಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಉಲ್ಲೇಖ-1 ರನ್ವಯ ಹೊರಡಿಸಿರುತ್ತಾರೆ.

ಮುಂದುವರೆದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಘನ ಸರ್ಕಾರವು ಹೊರಡಿಸಿರುವ 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಶೈಕ್ಷಣಿಕ ವೇಳಾಪಟ್ಟಿಯನ್ನು ಯಥಾವತ್ತಾಗಿ ಹಾಗೂ ಕಡ್ಡಾಯವಾಗಿ ಪಾಲಿಸಲು ಈ ಮೂಲಕ ಸೂಚಿಸಲಾಗಿದೆ. ಸದರಿ ಶೈಕ್ಷಣಿಕ ವೇಳಾಪಟ್ಟಿಯನ್ನು ಈ ಆದೇಶದೊಂದಿಗೆ ಲಗ್ತತಿಸಲಾಗಿದೆ.

ವಿಶ್ವವಿದ್ಯಾಲಯದ ಸಂಯೋಜನೆಗೊಂಡ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಮಹಾವಿದ್ಯಾಲಯಗಳಲ್ಲಿ 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿ ಬಿಎ/ಬಿ.ಕಾಂ/ಬಿ.ಎಸ್.ಡ.ಬ್ಲ್ಯೂ/ಬಿ.ಎಸ್ಸಿ/ಬಿ,ಬಿ,ಎ/ಬಿ.ಸಿ.ಎಕೋರ್ಸಗಳ ಪ್ರವೇಶಾತಿಯನ್ನು ಭಾರತ ಸರ್ಕಾರವು ಪ್ರಕಟಿಸಿರುವ ರಾಷ್ಟ್ರೀಯ ಶಿಕ್ಷಣ ನೀತಿ-2022 ಅನುಸಾರ UG-CBCS Regulation ನಲ್ಲಿರುವ ಪ್ರವೇಶಾತಿ ಅರ್ಹತೆ ಪ್ರಕಾರ ಪ್ರಥಮ ವರ್ಷಕ್ಕೆ ಕಡ್ಡಾಯವಾಗಿ UUCMS ಆನ್‌ಲೈನ್ ತಂತ್ರಾಂಶದಲ್ಲಿ ಅರ್ಜಿಗಳನ್ನು ಆಹ್ವಾನಿಸಿ ಪ್ರವೇಶಾತಿಯನ್ನು ಕೈಗೊಳ್ಳಲು ಸೂಚಿಸಲಾಗಿದೆ.

27/05/23

ಕುಲಸಚಿವರು (ಪ್ರಭಾರ)
ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ

ಕುಲಸಚಿವರು
ಕೊಪ್ಪಳ ವಿಶ್ವವಿದ್ಯಾಲಯ,
ಕೊಪ್ಪಳ-583231

ಗೆ,

ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಎಲ್ಲಾ ಸ್ನಾತಕ ಸಂಯೋಜಿತ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ.

**ಪ್ರತಿಗಳು:**

1. ಮಾನ್ಯ ಕುಲಪತಿಗಳ ಆಪ್ತ ಶಾಖೆ,ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ.
2. ಕುಲಸಚಿವರು (ಮೌಲ್ಯಮಾಪನ)ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ.
3. ಹಣಕಾಸು ಅಧಿಕಾರಿಗಳು, ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ.
4. ನಿರ್ದೇಶಕರು, ಸ್ನಾತಕೋತ್ತರ ಕೇಂದ್ರ, ಯಲಬುರ್ಗಾ, ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ.
5. ಕಛೇರಿ ಪ್ರತಿ.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಯ ಶೈಕ್ಷಣಿಕಾ ವೇಳಾಪಟ್ಟಿಯ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 217 ಯುಎನ್‌ಇ 2022, ದಿನಾಂಕ: 09.07.2022.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಇವರ ಟಿಪ್ಪಣಿ ದಿನಾಂಕ: 18.02.2023.

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಆದೇಶದಲ್ಲಿ 2022-23ನೇ ಶೈಕ್ಷಣಿಕ ಸಾಲಿಗೆ ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳು/ಕಾಲೇಜು ಶಿಕ್ಷಣ/ಅನುದಾನ/ಅನುದಾನ ರಹಿತ ಕಾಲೇಜುಗಳಿಗೆ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಸ್ನಾತಕ/ಸ್ನಾತಕೋತ್ತರ ಶೈಕ್ಷಣಿಕ ವೇಳಾಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಅದರಂತೆ, 2023-24ನೇ ಶೈಕ್ಷಣಿಕ ಸಾಲಿಗೂ ಸಹ ಸ್ನಾತಕ ಪದವಿಯ ಶೈಕ್ಷಣಿಕಾ ವೇಳಾಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸುವಂತೆ ಸರ್ಕಾರದಿಂದ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತನ್ನು ಕೋರಲಾಗಿರುತ್ತದೆ.

ಮೇಲೆ ಓದಲಾದ (1)ರ ಟಿಪ್ಪಣಿಯಲ್ಲಿ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಇವರು 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಿದ್ದು, ಸದರಿ ವೇಳಾಪಟ್ಟಿಯನ್ವಯ ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಗೊಳಪಡುವ ಎಲ್ಲಾ ಕಾಲೇಜುಗಳಲ್ಲಿ ಶೈಕ್ಷಣಿಕಾ ವೇಳಾಪಟ್ಟಿಯನ್ನು ಅನುಷ್ಠಾನಗೊಳಿಸಲು ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ರಾಷ್ಟ್ರೀಯ ಶಿಕ್ಷಣ ನೀತಿಯನ್ವಯ ವಿದ್ಯಾರ್ಥಿಗಳಿಗೆ ತರಗತಿಗಳನ್ನು ಮತ್ತು ಪರೀಕ್ಷೆಗಳನ್ನು ನಿಗದಿತ ಸಮಯದಲ್ಲಿ ನಡೆಸಿ, ಫಲಿತಾಂಶವನ್ನು ಪ್ರಕಟಿಸುವುದು ಅತ್ಯಾವಶ್ಯಕವಾಗಿದೆ. ಇದಲ್ಲದೇ ವಿದ್ಯಾರ್ಥಿ ವೇತನ (Scholarship Programmes) ನ್ನು ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಇದನ್ನು ಸೂಕ್ತ ಸಮಯದಲ್ಲಿ ಸಮರ್ಪಕವಾಗಿ ವಿದ್ಯಾರ್ಥಿಗಳಿಗೆ ಸದ್ಬಳಕೆಯಾಗಬೇಕಾಗಿರುವುದರಿಂದ ವಿದ್ಯಾರ್ಥಿಗಳಿಗೆ ಅನುವಾಗುವಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಸರ್ಕಾರವು ಹೊರಡಿಸಬೇಕಾಗಿರುತ್ತದೆ.

ಮೇಲ್ಕಂಡ ಅಂಶಗಳನ್ವಯ ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಇವರು ದಿನಾಂಕ: 18.05.2023ರಂದು ನೀಡಿರುವ ವರದಿಯನುಸಾರ 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು /ಕಾಲೇಜು ಶಿಕ್ಷಣ/ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಜಾರಿಗೊಳಿಸಲು ತೀರ್ಮಾನಿಸಿ, ಅದರಂತೆ ಈ ಕೆಳಕಂಡ ಆದೇಶ.

### ಸರ್ಕಾರಿ ಆದೇಶ ಸಂ. ಇಡಿ 80 ಯುಎನ್‌ಇ 2023, ಬೆಂಗಳೂರು, ದಿನಾಂಕ:23.05.2023.

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಶೈಕ್ಷಣಿಕ ಸಾಲಿನ ಸ್ನಾತಕ ಪದವಿಗೆ ಸಂಬಂಧಿಸಿದಂತೆ ಶೈಕ್ಷಣಿಕ ವೇಳಾಪಟ್ಟಿಯನ್ನು ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳು /ಕಾಲೇಜು ಶಿಕ್ಷಣ/ಅನುದಾನ/ ಅನುದಾನ ರಹಿತ ಕಾಲೇಜುಗಳಲ್ಲಿ (ತಾಂತ್ರಿಕ ಶಿಕ್ಷಣವನ್ನು ಹೊರತುಪಡಿಸಿ) ಈ ಕೆಳಕಂಡಂತೆ ಕೂಡಲೇ ಕಡ್ಡಾಯವಾಗಿ ಜಾರಿಗೊಳಿಸುವಂತೆ ಆದೇಶಿಸಿದೆ.

### Common Calendar of Events for the First Year of UG (Undergraduate) Programs of the Academic Year 2023-24

| Sl.No. | Academic Activity | Dates |
|---|---|---|
| 01 | Commencement of I Semester Admissions | 22.05.2023 |
| 02 | Last date for admission to 1st Semester without penal fee | 15.07.2023 |
| 03 | Last date for admission to 1st Semester with penal fee | 31.07.2023 |

| | | |
|---|---|---|
| 04 | Commencement of I Semester Classes | 17.07.2023 |
| 05 | End of I Semester Classes | 18.11.2023 |
| 06 | Commencement of I Semester Practical & Theory Examinations | 20.11.2023 |
| 07 | Vacation*<br>Examination (Practical & Theory), Valuation and Results | 20.11.2023 to 15.01.2024 |
| 08 | Commencement of II Semester Classes | 16.01.2024 |
| 09 | End of II Semester Classes | 11.05.2024 |
| 10 | Commencement of II Semester Practical & Theory Examinations | 13.05.2024 |
| 11 | Vacation*<br>Examination (Practical & Theory), Valuation and Results | 16.05.2024 to 29.06.2024 |

*** Teachers on vacation should take up the assigned examination work, including valuation.**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-1).

ಇವರಿಗೆ:

1. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳು ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು.
6. ಆಯುಕ್ತರು, ಸಮಾಜಕಲ್ಯಾಣ ಇಲಾಖೆ, ಬೆಂಗಳೂರು.
7. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
8. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು.
9. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
10. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನ ಕಾಲೇಜುಗಳ ಪ್ರಾಂಶುಪಾಲರಿಗೆ (ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಇವರ ಮುಖಾಂತರ).
11. ಕುಲಸಚಿವರು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ವಿಶ್ವವಿದ್ಯಾಲಯಗಳು.
12. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ವಿಶ್ವವಿದ್ಯಾಲಯಗಳ ಕಾಲೇಜುಗಳಿಗೆ (ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಮೂಲಕ).
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಇ-ಸಮನ್ವಯಾಧಿಕಾರಿ, ಉನ್ನತ ಶಿಕ್ಷಣ ಇಲಾಖೆ, ಇವರಿಗೆ (ಉನ್ನತ ಶಿಕ್ಷಣ ಇಲಾಖೆ ಜಾಲತಾಣದಲ್ಲಿ ಪ್ರಕಟಿಸಲು)